Akashvani: Bangalore
National Bulletin In Kannada
13.06.2026: 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*********

ಮುಖ್ಯಾಂಶಗಳು :

1. ಡೆಹ್ರಾಡೂನ್‌ನ ಭಾರತೀಯ ಮಿಲಿಟರಿ ಅಕಾಡೆಮಿಯಲ್ಲಿಂದು ನಿರ್ಗಮನ ಪಥಸಂಚಲನ ಪರಿಶೀಲಿಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು
2. ಫ್ರಾನ್ಸ್‌ನ ನೀಸ್‌ನಲ್ಲಿ ನಾಳೆ 'ಭಾರತ್ ಇನ್ನೋವೇಟ್ಸ್' ಕಾರ್ಯಕ್ರಮ ಉದ್ಘಾಟಿಸಲಿರುವ ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರೋನ್
3. ಸ್ವದೇಶಿ ಕ್ಷಿಪಣಿ ವ್ಯವಸ್ಥೆಗಳ ಸಾಧನೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘನೆ
4. ನೀಟ್-ಯುಜಿ ಮರುಪರೀಕ್ಷೆ; ಸಂಪುಟ ಕಾರ್ಯದರ್ಶಿ ಡಾ. ಟಿ.ವಿ. ಸೋಮನಾಥನ್ ಅವರಿಂದ ಸಿದ್ಧತೆಗಳ ಪರಿಶೀಲನೆ
5. ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್; ಶ್ರೀಲಂಕಾ ತಂಡದ ವಿರುದ್ಧ ಇಂಗ್ಲೆಂಡ್‌ಗೆ ೮೭ ರನ್‌ಗಳ ಜಯ

***********

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಡೆಹ್ರಾಡೂನ್‌ನ ಭಾರತೀಯ ಮಿಲಿಟರಿ ಅಕಾಡೆಮಿಯಲ್ಲಿ ನಿರ್ಗಮನ ಪಥಸಂಚಲನವನ್ನು ಪರಿಶೀಲಿಸಲಿದ್ದಾರೆ. ಈ ವರ್ಷದ ನಿರ್ಗಮನ ಪಥಸಂಚಲನ ಐತಿಹಾಸಿಕವಾಗಲಿದೆ, ಏಕೆಂದರೆ ಮೊದಲ ಬಾರಿಗೆ ಮಹಿಳಾ ಕೆಡೆಟ್‌ಗಳು ತಮ್ಮ ಪುರುಷ ಸಹವರ್ತಿಗಳೊಂದಿಗೆ ಪಥಸಂಚಲನ ನಡೆಸಲಿದ್ದಾರೆ. ಈ ಭವ್ಯ ಸಮಾರಂಭದಲ್ಲಿ, ೫೦೦ಕ್ಕೂ ಹೆಚ್ಚು ಕೆಡೆಟ್‌ಗಳು ಅಂತಿಮ ಹೆಜ್ಜೆ ಹಾಕಲಿದ್ದಾರೆ ಮತ್ತು ಭಾರತೀಯ ಸೇನೆಯಲ್ಲಿ ಅಧಿಕಾರಿಗಳಾಗಿ ನಿಯೋಜನೆಗೊಳ್ಳುತ್ತಾರೆ. ಭಾರತೀಯ ಮಿಲಿಟರಿ ಅಕಾಡೆಮಿಯ ಪಥಸಂಚಲನ ಕೇವಲ ಮಿಲಿಟರಿ ಸಂಪ್ರದಾಯವಲ್ಲ, ಬದಲಾಗಿ ರಾಷ್ಟ್ರಕ್ಕೆ ಸೇವೆ ಸಲ್ಲಿಸಲು ಸಮರ್ಪಿತವಾಗಿರುವ ಯುವ ಅಧಿಕಾರಿಗಳಿಗೆ ಹೊಸ ಪ್ರಯಾಣದ ಆರಂಭವನ್ನು ಸೂಚಿಸುತ್ತದೆ.

***********

ಫ್ರಾನ್ಸ್‌ನ ನೀಸ್‌ನಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರೋನ್ 'ಭಾರತ್ ಇನ್ನೋವೇಟ್ಸ್' ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ಜಾಗತಿಕ ಅಗತ್ಯಗಳನ್ನು ಪೂರೈಸುವ ಭಾರತದ ಮುಂದಿನ ತಲೆಮಾರಿನ ನಾವೀನ್ಯತೆಗಳು, ವ್ಯವಹಾರಿಕ ಪ್ರಸ್ತಾವನೆಗಳು ಮತ್ತು ಆವಿಷ್ಕಾರಗಳನ್ನು ಈ ಕಾರ್ಯಕ್ರಮದಲ್ಲಿ ಪ್ರದರ್ಶಿಸಲಾಗುವುದು ಎಂದು ತಿಳಿಸಿದ್ದಾರೆ. ಸಾವಿರಾರು ಪ್ರಸ್ತಾವನೆಗಳ ಪೈಕಿ ಪರಿಶೀಲನೆಯ ನಂತರ ಕೇಂದ್ರ ಶಿಕ್ಷಣ ಇಲಾಖೆಯು, ೧೨೦ ನವೋದ್ಯಮಗಳನ್ನು ಆಯ್ಕೆ ಮಾಡಿದೆ. ೧೩ ಆದ್ಯತಾ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಸ್ಟಾರ್ಟ್‌ಅಪ್‌ಗಳು, ಭಾರತದ ೨೦ಕ್ಕೂ ಹೆಚ್ಚು ಪ್ರಮುಖ ಸಂಸ್ಥೆಗಳೊಂದಿಗೆ ಸಹಭಾಗಿತ್ವ ಹೊಂದಿವೆ ಎಂದು ಅವರು ಮಾಹಿತಿ ನೀಡಿದರು.

***********

'ಆಪರೇಷನ್ ಸಿಂಧೂರ್' ಸಂದರ್ಭದಲ್ಲಿ ಸ್ವದೇಶಿ ಕ್ಷಿಪಣಿ ವ್ಯವಸ್ಥೆಗಳು ತೋರಿದ ಅಸಾಧಾರಣ ಪ್ರದರ್ಶನವು ಭಾರತದ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ವಲಯದ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಹೈದರಾಬಾದ್‌ನ ಡಿಆರ್‌ಡಿಒದ ಡಿಆರ್‌ಡಿಎಲ್‌ನಲ್ಲಿ ಅತ್ಯಾಧುನಿಕ 'ಸುಧಾರಿತ ಶಸ್ತ್ರಾಸ್ತ್ರ ವ್ಯವಸ್ಥೆ ಸಂಕೀರ್ಣ'ವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಡಿಆರ್‌ಡಿಒ ಅಭಿವೃದ್ಧಿಪಡಿಸಿರುವ ಆಕಾಶ್ ಮತ್ತು ಬ್ರಹ್ಮೋಸ್‌ನಂತಹ ಕ್ಷಿಪಣಿ ವ್ಯವಸ್ಥೆಗಳು ಜಾಗತಿಕ ರಕ್ಷಣಾ ತಂತ್ರಜ್ಞಾನದಲ್ಲಿ ಭಾರತದ ಸ್ಪರ್ಧಾತ್ಮಕ ಸಾಮರ್ಥ್ಯವನ್ನು ಸಾಬೀತುಪಡಿಸಿವೆ ಎಂದ ಅವರು, ಶಾಂತಿ ಸ್ಥಾಪನೆಗೆ ಶಕ್ತಿ ಅಗತ್ಯವಾಗಿದ್ದು, ಸ್ವಾವಲಂಬನೆಯೇ ಆ ಶಕ್ತಿಗೆ ಅತ್ಯಂತ ವಿಶ್ವಾಸಾರ್ಹ ತಳಹದಿಯಾಗಿದೆ ಎಂದು ತಿಳಿಸಿದರು. ವೇಗವಾಗಿ ಬದಲಾಗುತ್ತಿರುವ ಯುದ್ಧದ ಸ್ವರೂಪ ಮತ್ತು ಜಾಗತಿಕ ಅನಿಶ್ಚಿತತೆಗಳ ನಡುವೆ ರಾಷ್ಟ್ರೀಯ ಭದ್ರತೆಯನ್ನು ರಕ್ಷಿಸಲು ಶತ್ರುಗಳನ್ನು ಮಟ್ಟಹಾಕುವ ಪ್ರಬಲ ನಿರೋಧಕ ಸಾಮರ್ಥ್ಯ ಅತ್ಯಗತ್ಯ ಎಂದ ಸಚಿವರು ಭವಿಷ್ಯದ ಸವಾಲುಗಳನ್ನು ಎದುರಿಸಲು ಸಶಸ್ತ್ರ ಪಡೆಗಳಿಗೆ ಅತ್ಯಾಧುನಿಕ ರಕ್ಷಣಾ ವ್ಯವಸ್ಥೆಗಳನ್ನು ಒದಗಿಸಬೇಕಾದ ಅಗತ್ಯವನ್ನು ಪ್ರತಿಪಾದಿಸಿದರು. ಇದೇ ಸಂದರ್ಭದಲ್ಲಿ ಅವರು ಡಿಆರ್‌ಡಿಒ ಅಭಿವೃದ್ಧಿಪಡಿಸಿರುವ ಅತ್ಯಾಧುನಿಕ ರಕ್ಷಣಾ ತಂತ್ರಜ್ಞಾನಗಳು ಹಾಗೂ ಸ್ವದೇಶಿ ಕ್ಷಿಪಣಿ ವೇದಿಕೆಗಳ ತಾಂತ್ರಿಕ ಪ್ರದರ್ಶನವನ್ನು ವೀಕ್ಷಿಸಿದರು.

***********

ಮುಂಬರುವ ನೀಟ್-ಯುಜಿ ಮರುಪರೀಕ್ಷೆಯ ಸಿದ್ಧತೆಗಳ ಕುರಿತು ಸಂಪುಟ ಕಾರ್ಯದರ್ಶಿ ಡಾ. ಟಿ.ವಿ. ಸೋಮನಾಥನ್ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ಮಹಾನಿರ್ದೇಶಕ ಅಭಿಷೇಕ್ ಸಿಂಗ್ ಅವರೊಂದಿಗೆ ಉನ್ನತ ಮಟ್ಟದ ಪರಿಶೀಲನಾ ಸಭೆ ನಡೆಸಿದ್ದಾರೆ. ಸಭೆಯಲ್ಲಿ ಮಾತನಾಡಿದ ಅವರು, ಎಲ್ಲಾ ಸಂಬಂಧಿತ ಪಾಲುದಾರರ ನಡುವೆ ನಿಕಟ ಸಮನ್ವಯತೆಯನ್ನು ಸಾಧಿಸುವ ಮೂಲಕ ಮರುಪರೀಕ್ಷೆಯನ್ನು ಸುಗಮವಾಗಿ, ಪಾರದರ್ಶಕವಾಗಿ ಮತ್ತು ಸುರಕ್ಷಿತವಾಗಿ ನಡೆಸುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಒತ್ತು ನೀಡಿದ್ದಾರೆ. ಪರೀಕ್ಷೆಯ ಪಾವಿತ್ರ್ಯತೆ ಹಾಗೂ ಸುಗಮ ನಿರ್ವಹಣೆಗೆ ಧಕ್ಕೆ ತರಲು, ಅಡ್ಡಿಪಡಿಸಲು ಅಥವಾ ಯಾವುದೇ ರೀತಿಯ ಅಕ್ರಮ ಎಸಗಲು ಯತ್ನಿಸುವ ಯಾವುದೇ ವ್ಯಕ್ತಿಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದಿದ್ದಾರೆ. ನೀಟ್ ಮರುಪರೀಕ್ಷೆಯು ದೇಶಾದ್ಯಂತ ಇದೇ ೨೧ ರಂದು ಜರುಗಲಿದ್ದು, ಯಾವುದೇ ಲೋಪದೋಷಗಳಿಲ್ಲದೆ ಪರೀಕ್ಷೆ ನಡೆಸಲು ಎಲ್ಲಾ ಹಂತಗಳಲ್ಲೂ ಅಗತ್ಯ ಮುನ್ನೆಚ್ಚರಿಕೆಗಳನ್ನು ಕೈಗೊಳ್ಳಲಾಗಿದೆ.

***********

ಒಮಾನ್ ಕರಾವಳಿಯಲ್ಲಿ ಅಮೆರಿಕ ನೌಕಾಪಡೆ ನಡೆಸಿದ ದಾಳಿಯಲ್ಲಿ ಮೂವರು ಭಾರತೀಯ ನಾವಿಕರು ಮೃತಪಟ್ಟ ಘಟನೆಯನ್ನು ಖಂಡಿಸಿ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ಅವರೊಂದಿಗೆ ಮಾತನಾಡಿ, ತೀವ್ರ ಪ್ರತಿಭಟನೆ ದಾಖಲಿಸಿದ್ದಾರೆ. ಪಲಾವ್ ದೇಶದ ಧ್ವಜ ಹೊಂದಿದ್ದ 'ಎಂಟಿ ಸೆಟ್ಟೆಬೆಲ್ಲೊ' ವಾಣಿಜ್ಯ ಹಡಗಿನ ಮೇಲಿನ ಇಂತಹ ದಾಳಿಗಳು ಯಾವುದೇ ರೀತಿಯಲ್ಲೂ ಸಮರ್ಥನೀಯವಲ್ಲ ಎಂದು ಡಾ. ಜೈಶಂಕರ್ ಸಾಮಾಜಿಕ ಜಾಲತಾಣದ ಸಂದೇಶದಲ್ಲಿ ತಿಳಿಸಿದ್ದಾರೆ. ಹಡಗಿನಲ್ಲಿದ್ದ ೨೪ ಭಾರತೀಯ ಸಿಬ್ಬಂದಿ ಪೈಕಿ ೨೧ ಜನರನ್ನು ರಕ್ಷಿಸಲಾಗಿದ್ದು, ನಾಪತ್ತೆಯಾಗಿದ್ದ ಮೂವರು ಸಾವನ್ನಪ್ಪಿರುವುದು ದೃಢಪಟ್ಟಿದೆ. ಘಟನೆಗೆ ಸಂಬಂಧಿಸಿದಂತೆ ನವದೆಹಲಿಯಲ್ಲಿರುವ ಅಮೆರಿಕದ ರಾಯಭಾರ ಕಚೇರಿಯ ಉನ್ನತ ಅಧಿಕಾರಿಗೆ ಸಮನ್ಸ್ ಜಾರಿಗೊಳಿಸಿ ಭಾರತ ಸರ್ಕಾರ ವಿವರಣೆ ಕೇಳಿದೆ. ನಾಗರಿಕ ವಾಣಿಜ್ಯ ಹಡಗುಗಳ ಮೇಲಿನ ದಾಳಿಗಳು ಅಂತಾರಾಷ್ಟ್ರೀಯ ಕಡಲ ವ್ಯಾಪಾರದ ಸುರಕ್ಷತೆ ಮತ್ತು ಸ್ಥಿರತೆಗೆ ಧಕ್ಕೆ ತರುತ್ತವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತೀವ್ರ ಕಳವಳ ವ್ಯಕ್ತಪಡಿಸಿದೆ. ಭಾರತೀಯ

ಸಿಬ್ಬಂದಿಯನ್ನು ಹೊಂದಿರುವ ವಾಣಿಜ್ಯ ಹಡಗುಗಳ ಮೇಲಿನ ದಾಳಿಗಳು ತಕ್ಷಣವೇ ನಿಲ್ಲಬೇಕು ಎಂದು ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಆಗ್ರಹಿಸಿದ್ದು, ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಗಾಗಿ ರಾಜತಾಂತ್ರಿಕ ಮಾತುಕತೆಗೆ ಕರೆ ನೀಡಿದ್ದಾರೆ.

***********

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ರೈಲ್ವೆ ನೇಮಕಾತಿ ಮಂಡಳಿ ನೇಮಕಾತಿ ಪ್ರಕ್ರಿಯೆಯ ಕುರಿತು ಭಾರತೀಯ ರೈಲ್ವೆಯ ಹಿರಿಯ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ ಮಾತನಾಡಿದ ಅವರು ಹೆಚ್ಚು ಪಾರದರ್ಶಕ, ನಿಖರ ಮತ್ತು ತಂತ್ರಜ್ಞಾನ-ಚಾಲಿತ ವ್ಯವಸ್ಥೆಯ ಅಗತ್ಯವನ್ನು ಒತ್ತಿ ಹೇಳಿದರು. ಇಲಾಖಾ ಪರೀಕ್ಷೆಗಳನ್ನು ಕಂಪ್ಯೂಟರ್ ಆಧಾರಿತ ಪರೀಕ್ಷಾ ವಿಧಾನಕ್ಕೆ ಬದಲಾಯಿಸುವಲ್ಲಿ ಆಗಿರುವ ಪ್ರಗತಿಯನ್ನು ಅವರು ಪರಿಶೀಲಿಸಿದರು ಮತ್ತು ನೇಮಕಾತಿಯನ್ನು ವೇಗವಾಗಿ, ಪರಿಣಾಮಕಾರಿಯಾಗಿ ಮತ್ತು ಬಳಕೆದಾರ ಸ್ನೇಹಿಯಾಗಿ ಮಾಡಲು ಹೆಚ್ಚಿನ ಟ್ಯಾಬ್ಲೆಟ್ ಆಧಾರಿತ ಪರೀಕ್ಷೆಗಳನ್ನು ಪರಿಚಯಿಸಬೇಕು ಎಂದು ಹೇಳಿದರು. ಸಭೆಯಲ್ಲಿ, ವಾರ್ಷಿಕ ನೇಮಕಾತಿ ಮತ್ತು ಖಾಲಿ ಹುದ್ದೆಗಳ ತ್ರೈಮಾಸಿಕ ಅಧಿಸೂಚನೆಗಳನ್ನು ಅಭ್ಯರ್ಥಿಗಳು ಉತ್ತಮವಾಗಿ ಸ್ವೀಕರಿಸಿದ್ದಾರೆ ಎಂದು ವೈಷ್ಣವ್ ಹೇಳಿದ್ದಾರೆ. ನಿರಂತರ ಸುಧಾರಣೆಯ ಅಗತ್ಯವನ್ನು ಪ್ರಸ್ತಾಪಿಸಿದ ಸಚಿವರು, ರೈಲ್ವೆ ನೇಮಕಾತಿ ವ್ಯವಸ್ಥೆಯು ತಂತ್ರಜ್ಞಾನದ ಬಳಕೆ, ವೇಗವಾದ ಪ್ರಕ್ರಿಯೆಗಳು ಮತ್ತು ಹೆಚ್ಚಿನ ಹೊಣೆಗಾರಿಕೆಯ ಮೂಲಕ ವಿಕಸನಗೊಳ್ಳುತ್ತಲೇ ಇರಬೇಕು ಎಂದು ಹೇಳಿದರು. ಭಾರತೀಯ ರೈಲ್ವೆ ೨೦೨೫-೨೬ರ ಆರ್ಥಿಕ ವರ್ಷದಲ್ಲಿ ಆರು ಪ್ರಮುಖ ವಿಭಾಗಗಳಲ್ಲಿ ೪೭ ಸಾವಿರಕ್ಕೂ ಹೆಚ್ಚು ಖಾಲಿ ಹುದ್ದೆಗಳನ್ನು ಒಳಗೊಂಡಂತೆ ಪೂರ್ಣಗೊಂಡ ನೇಮಕಾತಿ ಚಕ್ರಗಳ ಮೂಲಕ ೪೩ ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳನ್ನು ನೇಮಕ ಮಾಡಿಕೊಂಡಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

***********

ಕಳೆದ ೧೨ ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿಯ ನಾಯಕತ್ವದಲ್ಲಿ ಸಬ್ಕಾ ಸಾಥ್, ಸಬ್ಕಾ ವಿಕಾಸ್, ಸಬ್ಕಾ ವಿಶ್ವಾಸ್ ಮತ್ತು ಸಬ್ಕಾ ಪ್ರಯಾಸ್ ತತ್ವಗಳಿಂದ ಭಾರತವು ಗಮನಾರ್ಹ ಪರಿವರ್ತನೆಗೆ ಒಳಗಾಗಿದೆ. ಈ ಅವಧಿಯಲ್ಲಿ, ಮೋದಿ ಸರ್ಕಾರವು ಬಡವರು, ರೈತರು, ಮಹಿಳೆಯರು ಮತ್ತು ಯುವಕರ ಕಲ್ಯಾಣ ಮತ್ತು ಸಬಲೀಕರಣಕ್ಕಾಗಿ ಅನೇಕ ಪ್ರಮುಖ ಉಪಕ್ರಮಗಳನ್ನು ಪ್ರಾರಂಭಿಸಿದೆ. ಕಳೆದ ೧೨ ವರ್ಷಗಳಲ್ಲಿ, ಭಾರತದ ಸಾಂಸ್ಕೃತಿಕ

ಪ್ರಯಾಣವು ಪ್ರವರ್ಧಮಾನಕ್ಕೆ ಬಂದಿದೆ ಮತ್ತು ಸಂಪ್ರದಾಯದಲ್ಲಿ ಬೇರೂರಿದೆ ಮತ್ತು ಜಗತ್ತಿಗೆ ಮುಕ್ತವಾಗಿದೆ. ಸರ್ಕಾರವು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹಲವಾರು ಉಪಕ್ರಮಗಳನ್ನು ಕೈಗೊಂಡಿದೆ, ಅದು ಜನರಲ್ಲಿ ದೇಶದ ಸಾಂಸ್ಕೃತಿಕ ಪರಂಪರೆಯ ಬಗ್ಗೆ ಆಳವಾದ ಹೆಮ್ಮೆಯನ್ನು ಮೂಡಿಸಿದೆ. ಕಾಶಿ ವಿಶ್ವನಾಥ ಕಾರಿಡಾರ್ ನಿರ್ಮಾಣ, ಮಹಾಕಾಲ್ ಲೋಕ ಯೋಜನೆ, ಮಾ ಕಾಮಾಕ್ಯ ದೇವಾಲಯದ ಪುನರ್ ನಿರ್ಮಾಣ, ಜುನಾ ಸೋಮನಾಥ ದೇವಾಲಯದ ಪುನರ್ನಿರ್ಮಾಣ ಮತ್ತು ಅಯೋಧ್ಯೆಯಲ್ಲಿ ರಾಮ ದೇವಾಲಯ ಸ್ಥಾಪನೆ ಸರ್ಕಾರದ ಪ್ರಮುಖ ಮುಖ್ಯಾಂಶಗಳಾಗಿವೆ. ಆಧ್ಯಾತ್ಮಿಕ ಮತ್ತು ಆಧುನಿಕ ಯಾತ್ರಾ ಸೌಲಭ್ಯಗಳ ಮೂಲಕ, ಭಾರತದ ನಾಗರಿಕತೆಯ ಹೆಮ್ಮೆಯನ್ನು ಸರಾಗವಾಗಿ ಪುನರುಜ್ಜೀವನಗೊಳಿಸಲಾಗುತ್ತಿದೆ. ಈ ಪರಿವರ್ತನೆಗೆ ಚಾಲನೆ ನೀಡುವ ಪ್ರಮುಖ ಉಪಕ್ರಮಗಳಲ್ಲಿ ಮ್ಯೂಸಿಯಂ ಅನುದಾನ ಯೋಜನೆ ಮತ್ತು ಸಾಂಸ್ಕೃತಿಕ ಕಾರ್ಯ ಮತ್ತು ಉತ್ಪಾದನಾ ಅನುದಾನ ಯೋಜನೆ ಸೇರಿವೆ. ಮ್ಯೂಸಿಯಂ ಅನುದಾನ ಯೋಜನೆಯಡಿಯಲ್ಲಿ, ೨೧ ಹೊಸ ವಸ್ತುಸಂಗ್ರಹಾಲಯಗಳನ್ನು ಸ್ಥಾಪಿಸುವ ಮೂಲಕ ಮತ್ತು ಅಸ್ತಿತ್ವದಲ್ಲಿರುವ ೨೩ ವಸ್ತುಸಂಗ್ರಹಾಲಯಗಳನ್ನು ಆಧುನೀಕರಿಸುವ ಮೂಲಕ ರಾಷ್ಟ್ರದ ಸಾಂಸ್ಕೃತಿಕ ಮೂಲಸೌಕರ್ಯವನ್ನು ನವೀಕರಿಸಲಾಗಿದೆ.

***********

ಏರ್ ಇಂಡಿಯಾ ವಿಮಾನ ಂI-೧೭೧ ಅಪಘಾತ ಪ್ರಕರಣದ ತನಿಖೆಯು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕಾರ್ಯವಿಧಾನಗಳಿಗೆ ಅನುಗುಣವಾಗಿ ಶ್ರದ್ಧೆ ಮತ್ತು ವೃತ್ತಿಪರತೆಯೊಂದಿಗೆ ಮುಂದುವರೆದಿದೆ ಎಂದು ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಹೇಳಿದ್ದಾರೆ. ಕಳೆದ ವರ್ಷ ಸಂಭವಿಸಿದ ದುರಂತ ವಿಮಾನ ಅಪಘಾತದಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು ಸಂತಾಪ ಸೂಚಿಸಿದ್ದಾರೆ. ಕಳೆದ ವರ್ಷ ಅಹಮದಾಬಾದ್‌ನ ಸರ್ದಾರ್ ವಲ್ಲಭಭಾಯ್ ಪಟೇಲ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ಸಂಭವಿಸಿದ ದುರಂತ ಅಪಘಾತದಿಂದ ನಿನ್ನೆಗೆ ಒಂದು ವರ್ಷ ತುಂಬುತ್ತಿರುವುದರಿಂದ, ಅಪಘಾತದ ಕಾರಣಗಳ ಸಂಪೂರ್ಣ ಮತ್ತು ವಸ್ತುನಿಷ್ಠ ನಿರ್ಣಯಕ್ಕೆ ಮತ್ತು ವಾಯುಯಾನ ಸುರಕ್ಷತೆಯನ್ನು ಮತ್ತಷ್ಟು ಹೆಚ್ಚಿಸಲು ಸರ್ಕಾರ ಬದ್ಧವಾಗಿದೆ ಎಂದು ಸಚಿವರು ಭರವಸೆ ನೀಡಿದ್ದಾರೆ.  ಏತನ್ಮಧ್ಯೆ, ತನಿಖೆಯ ಪ್ರಗತಿಯ ಕುರಿತು ಮಧ್ಯಂತರ ಹೇಳಿಕೆಯನ್ನು ಬಿಡುಗಡೆ

ಮಾಡಿರುವ ಎಎಐಬಿ, ಎಲ್ಲಾ ತನಿಖಾ ಚಟುವಟಿಕೆಗಳು ಮತ್ತು ಅಗತ್ಯ ಅಂತರರಾಷ್ಟ್ರೀಯ ಪರಿಶೀಲನೆ ಪೂರ್ಣಗೊಂಡ ನಂತರ ಅಂತಿಮ ವರದಿಯನ್ನು ಬಿಡುಗಡೆ ಮಾಡಲಾಗುವುದು ಎಂದು ಹೇಳಿದೆ.

***********

ಸಿಡ್ನಿಯಲ್ಲಿ ಇಂದು ನಡೆಯಲಿರುವ ಆಸ್ಟ್ರೇಲಿಯನ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯ ಮಹಿಳಾ ಸಿಂಗಲ್ಸ್ ಸೆಮಿಫೈನಲ್‌ನಲ್ಲಿ, ಭಾರತದ ಪಿವಿ ಸಿಂಧು, ವಿಶ್ವ ಚಾಂಪಿಯನ್ ಜಪಾನ್‌ನ ಅಕಾನೆ ಯಮಗುಚಿ ಅವರನ್ನು ಎದುರಿಸಲಿದ್ದಾರೆ. ಮೂರನೇ ಶ್ರೇಯಾಂಕದ ಭಾರತೀಯ ಆಟಗಾರ್ತಿ ಸಿಂಧು, ಕ್ವಾರ್ಟರ್ ಫೈನಲ್‌ನಲ್ಲಿ ಕೇವಲ ೨೭ ನಿಮಿಷಗಳಲ್ಲಿ ಚೆನ್ ಸು ಯು ವಿರುದ್ಧ ೨೧-೭, ೨೧-೯ ಅಂತರದಲ್ಲಿ ಜಯಗಳಿಸಿ ಅಂತಿಮ ನಾಲ್ಕರಲ್ಲಿ ಸ್ಥಾನ ಕಾಯ್ದುಕೊಂಡರು.

***********

ಕೇಂದ್ರ ಸಂಸ್ಕೃತಿ ಸಚಿವಾಲಯದ, ಸಂಗೀತ ನಾಟಕ ಅಕಾಡೆಮಿ, ೨೦೨೪ ಹಾಗೂ ೨೦೨೫ನೇ ಸಾಲಿನ ಪುರಸ್ಕಾರಗಳನ್ನು ಪ್ರಕಟಿಸಿದ್ದು, ಕರ್ನಾಟಕದ ಏಳು ಕಲಾವಿದರು ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪ್ರಶಸ್ತಿಗೆ ಪಾತ್ರರಾದ ಹಿರಿಯ ಚಿತ್ರ ನಿರ್ದೇಶಕ ಟಿ.ಎಸ್.ನಾಗಾಭರಣ ಈ ಗೌರವದ ಬಗ್ಗೆ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ. ಹಿರಿಯ ಮೃದಂಗ ಕಲಾವಿದ ಎ.ವಿ ಆನಂದ ಸೇರಿದಂತೆ, ಏಳು ಜನರಿಗೆ ಅಕಾಡೆಮಿ ರತ್ನ ಪ್ರಶಸ್ತಿ ಸಂದಿದೆ. ಖ್ಯಾತ ಯಕ್ಷಗಾನ ಕಲಾವಿದ, ಸಂಘಟಕ, ಗುಣವಂತೆಯ ಶಿವಾನಂದ ಹೆಗಡೆ ಕೆರೆಮನೆ ಹಾಗೂ ಬಿಸಿಲುಕೊಪ್ಪದ ಪ್ರಸಿದ್ಧ ರುದ್ರ ವೀಣಾ ವಾದಕಿ ವಿದುಷಿ ಜ್ಯೋತಿ ಹೆಗಡೆ ಪ್ರತಿಷ್ಠಿತ ಕೇಂದ್ರ 'ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ' ಗೌರವಕ್ಕೆ ಪಾತ್ರರಾಗಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಶ್ಲಾಘಿಸಿದ್ದಾರೆ.

***********

ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬಾಸ್ಟನ್‌ನಲ್ಲಿ ನಿನ್ನೆ ನಡೆದ ಐಸಿಸಿ ಮಹಿಳಾ ಟಿ೨೦ ಕ್ರಿಕೆಟ್ ವಿಶ್ವಕಪ್‌ನ ೧೦ನೇ ಆವೃತ್ತಿಯ ಉದ್ಘಾಟನಾ ಪಂದ್ಯದಲ್ಲಿ, ಆತಿಥೇಯ ಇಂಗ್ಲೆಂಡ್ ತಂಡ ಶ್ರೀಲಂಕಾವನ್ನು ೮೭ ರನ್‌ಗಳಿಂದ ಮಣಿಸಿತು. ಮೊದಲು ಬ್ಯಾಟಿಂಗ್ ಮಾಡಿದ ಇಂಗ್ಲೆಂಡ್ ತಂಡವು ಡ್ಯಾನಿ ವ್ಯಾಟ್-ಹಾಡ್ಜ್ ಅವರ ಅಜೇಯ ೧೦೫ ರನ್‌ಗಳ ನೆರವಿನಿಂದ ೨೦ ಓವರ್‌ಗಳಲ್ಲಿ ಒಂದು ವಿಕೆಟ್‌ಗೆ ೨೧೯ ರನ್ ಗಳಿಸಿತು. ಪ್ರತಿಯಾಗಿ, ಶ್ರೀಲಂಕಾ ೨೦ ಓವರ್‌ಗಳಲ್ಲಿ ೧೩೨ ರನ್‌ಗಳಿಗೆ ತನ್ನೆಲ್ಲ ವಿಕೆಟ್

ಕಳೆದುಕೊಂಡಿತು. ಒಂದು ತಿಂಗಳ ಕಾಲ ನಡೆಯುವ ಈ ಟೂರ್ನಿಯನ್ನು ಇಂಗ್ಲೆಂಡ್ ಮತ್ತು ವೇಲ್ಸ್‌ನಾದ್ಯಂತ ಆಯೋಜಿಸಲಾಗುತ್ತಿದ್ದು, ಮುಂದಿನ ತಿಂಗಳು ೫ ರಂದು ಲಾರ್ಡ್ಸ್ ಕ್ರಿಕೆಟ್ ಮೈದಾನದಲ್ಲಿ ಫೈನಲ್ ಪಂದ್ಯ ನಡೆಯಲಿದೆ. ಭಾರತೀಯ ಮಹಿಳಾ ತಂಡ ನಾಳೆ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ವಿರುದ್ಧ ತನ್ನ ಅಭಿಯಾನವನ್ನು ಪ್ರಾರಂಭಿಸಲಿದೆ. ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಭಾರತ ತಂಡವು ತಮ್ಮ ಮೊದಲ ಟಿ೨೦ ವಿಶ್ವಕಪ್ ಪ್ರಶಸ್ತಿಯನ್ನು ಗೆಲ್ಲುವ ಗುರಿಯೊಂದಿಗೆ ಕಣಕ್ಕಿಳಿಯುತ್ತಿದೆ. ಪಂದ್ಯಾವಳಿಯ ಇತಿಹಾಸದಲ್ಲಿ ಮೊದಲ ಬಾರಿಗೆ, ೧೨ ತಂಡಗಳು ಸ್ಪರ್ಧಿಸುತ್ತಿದ್ದು, ಏಳು ಸ್ಥಳಗಳಲ್ಲಿ ೩೩ ಪಂದ್ಯಗಳನ್ನು ನಿಗದಿಪಡಿಸಲಾಗಿದೆ. ಇದು ಇಲ್ಲಿಯವರೆಗಿನ ಐಸಿಸಿ ಮಹಿಳಾ ಟಿ೨೦ ವಿಶ್ವಕಪ್‌ನ ಅತಿದೊಡ್ಡ ಆವೃತ್ತಿಯಾಗಿದೆ.

***********

ಟೊರೊಂಟೋದಲ್ಲಿ ಇಂದು ನಡೆದ ಕೆನಡಾ ಮತ್ತು ಬಾಸ್ನಿಯಾ-ಹೆರ್ಜೆಗೊವಿನಾ ನಡುವಿನ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ಬಿ. ಗುಂಪಿನ ಪಂದ್ಯ ಡ್ರಾನಲ್ಲಿ ಅಂತ್ಯಗೊಂಡಿದೆ. ಪ್ರಸ್ತುತ ನಡೆಯುತ್ತಿರುವ ಪಂದ್ಯದಲ್ಲಿ ಅಮೆರಿಕ ಮತ್ತು ಪೆರಗ್ವೆ ಮುಖಾಮುಖಿಯಾಗಿದ್ದು, ಇತ್ತೀಚಿನ ವರದಿಯಂತೆ ಮೂರು ಗೋಲುಗಳನ್ನು ಗಳಿಸಿರುವ ಅಮೆರಿಕ ಮುನ್ನಡೆಯಲ್ಲಿದೆ.

***********